ಇಲಾಖೆ / ವಿಷಯ: DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ  ದಿನಾಂಕ : DATE : 01/08/2019

# ಜೆಡಿಎಸ್‌ನ ಅನರ್ಹ 3 ಶಾಸಕರ ಉಚ್ಚಾಟನೆ

ಸಂ.ಕ. ಸಮಾಚಾರ ಬೆಂಗಳೂರು

ಪಕ್ಷಕ್ಕೆ ಕೈಕೊಟ್ಟು ಹೋಗಿ ಇದೀಗ ಅನರ್ಹಗೊಂಡ ಮೂವರು ಶಾಸಕರನ್ನು ಜೆಡಿಎಸ್ ಉಚ್ಚಾಟಿಸಿದೆ.

ಹುಣಸೂರು ಕ್ಷೇತ್ರದಿಂದ ಸ್ಪರ್ಧಿಸಿ ಗೆದ್ದಿದ್ದ ಎಚ್.ವಿಶ್ವನಾಥ್, ಮಹಾಲಕ್ಷ್ಮಿ ಲೇಔಟ್‌ನಿಂದ ಗೆದ್ದಿದ್ದ ಕೆ.ಗೋಪಾಲಯ್ಯ, ಕೆ.ಆರ್.ಪೇಟೆ ಕ್ಷೇತ್ರದಿಂದ ಗೆದ್ದಿದ್ದ ಕೆ.ಸಿ.ನಾರಾಯಣಗೌಡ ಅವರನ್ನು ಜೆಡಿಎಸ್ ಪಕ್ಷದಿಂದ ಅಮಾನತ್ತು ಮಾಡಿ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ. ದೇವೇಗೌಡ ಅವರು ಆದೇಶ ಹೊರಡಿಸಿದ್ದಾರೆ.

ಈ ಮೂವರೂ ಪಕ್ಷ ವಿರೋಧಿ ಚಟುವಟಿಕೆಯಲ್ಲಿ ತೊಡಗಿಕೊಂಡಿದ್ದರು ಎಂದು ಜೆಡಿಎಸ್ ತಮ್ಮ ಪ್ರಕಟಣೆಯಲ್ಲಿ ತಿಳಿಸಿದೆ. ಈ ಮೂವರನ್ನು ಈಗಾಗಲೇ ರಮೇಶ್ ಕುಮಾರ್ ಅವರು ಶಾಸಕರ ಸ್ಥಾನದಿಂದ ಅನರ್ಹಗೊಳಿಸಿದ್ದಾರೆ.

ಮಂಗಳವಾರವಷ್ಟೇ ಕಾಂಗ್ರೆಸ್ ಹೈಕಮಾಂಡ್ ಪಕ್ಷದ 14 ಅನರ್ಹ ಶಾಸಕರನ್ನು ಉಚ್ಚಾಟನೆ ಮಾಡಿತ್ತು. ಇದೀಗ ಸಮ್ಮಿಶ್ರ ಸರ್ಕಾರದಲ್ಲಿ ಮಿತ್ರಪಕ್ಷವಾದ ಜೆಡಿಎಸ್ ಕೂಡಾ ತನ್ನ ಮೂವರು ಅನರ್ಹ ಶಾಸಕರನ್ನು ಉಚ್ಚಾಟಿಸಿರುವುದು ಇಲ್ಲಿ ಗಮನಾರ್ಹ.